# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ವಿರುಪನಗೌಡ ಸಿದ್ದನಗೌಡ ಪಾಟೀಲ್, ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಆಸುಂಡಿ ಗ್ರಾಮ ಪಂಚಾಯತಿ, ರಾಣೆಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಮಾನ್ಯ ಉಪಲೋಕಾಯುಕ್ತ ವರದಿಯ ಶಿಫಾರಸ್ಸಿನನ್ವಯ ಕ್ರಮವಹಿಸುವ ಬಗ್ಗೆ.

ಓದಲಾಗಿದೆ:

1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 457 ಗ್ರಾಪಂಕಾ 2012, ದಿನಾಂಕ 27.08.2012
2) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. ಲೋಕ್/ಇಎನ್‌ಕ್ಯೂ/14ಎ/364/2012/ಎಆರ್‌ಇ–11, ದಿನಾಂಕ 03.03.2018
3) ಸರ್ಕಾರದ ಸಮಸಂಖ್ಯೆಯ ಎರಡನೇ ಕಾರಣ ಕೇಳಿ ನೋಟೀಸ್, ದಿನಾಂಕ 19.03.2018
4) ಶ್ರೀ ವಿರುಪನಗೌಡ ಸಿದ್ದನಗೌಡ ಪಾಟೀಲ್, ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಆಸುಂಡಿ ಗ್ರಾಮ ಪಂಚಾಯತಿ, ರಾಣೆಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರು ಎರಡನೇ ಕಾರಣ ಕೇಳಿ ನೋಟೀಸ್‌ಗೆ ಸಲ್ಲಿಸಿರುವ ಉತ್ತರ, ದಿನಾಂಕ 31.05.2018

ಪ್ರಸ್ತಾವನೆ:

ಮೇಲೆ ಓದಲಾದ (1) ರಲ್ಲಿ, ಶ್ರೀ ವಿರುಪನಗೌಡ ಸಿದ್ದನಗೌಡ ಪಾಟೀಲ್, ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಆಸುಂಡಿ ಗ್ರಾಮ ಪಂಚಾಯತಿ, ರಾಣೆಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಕೆಳಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

"While you DGO Sri Virupanagowda Siddanagowda Patil, was working as incharge PDO, Asundi GP, Ranebennur Taluk, Haveri District The complainant namely Sri Basavanthappa Bhimappa Konnappanavar who was working as 'Sepoy' in that office was suspended by you on 11.12.2010 and to cancel the suspension order you asked for bribe of Rs.10,000/- and subsequently on 25.01.2011 reduced the demand to Rs.5,000/- and on 27.01.2011 took the said amount of Rs.5,000/- from the complainant towards bribe to show official favour failing to maintain absolute integrity and devotion to duty, the act of which was un-becoming of a Government Servant and thereby committed misconduct as enumerated u/r 3(1)(i) to (iii) of KCS(Conduct) Rules, 1966"

ಮೇಲೆ ಓದಲಾದ (2) ರಲ್ಲಿ, ತನಿಖಾಧಿಕಾರಿಗಳಾದ ಅಪರ ನಿಬಂಧಕರು, ವಿಚಾರಣೆಗಳು–11, ಕರ್ನಾಟಕ ಲೋಕಾಯುಕ್ತ ರವರು ತನಿಖೆ ನಡೆಸಿ ವರದಿ ಸಲ್ಲಿಸಿದ್ದು, ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ, ಮಾನ್ಯ ಉಪಲೋಕಾಯುಕ್ತರು ರವರ ದಿನಾಂಕ: 02.03.2018 ರ ವರದಿಯಲ್ಲಿ ಶ್ರೀ ವಿರುಪನಗೌಡ ಸಿದ್ದನಗೌಡ ಪಾಟೀಲ್, ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಆಸುಂಡಿ ಗ್ರಾಮ ಪಂಚಾಯತಿ, ರಾಣೆಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ಪಿಂಚಣಿಯಲ್ಲಿ ಶೇ.50 ರಷ್ಟನ್ನು ಶಾಶ್ವತವಾಗಿ ತಡೆಹಿಡಿಯುವ ದಂಡನೆಯನ್ನು ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ (3) ರಲ್ಲಿ ಪ್ರಕರಣದ ಸಂಬಂಧ ಮಾನ್ಯ ಉಪಲೋಕಾಯುಕ್ತರು ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುವ ಹಿನ್ನೆಲೆಯಲ್ಲಿ ಆಕ್ಷೇಪಣೆಗಳನ್ನು ಆಹ್ವಾನಿಸಿ ಸದರಿ ನೌಕರರಿಗೆ ಎರಡನೇ ಕಾರಣ ಕೇಳಿ ನೋಟೀಸ್ ನೀಡಲಾಗಿತ್ತು.

ಮೇಲೆ ಓದಲಾದ (4) ರಲ್ಲಿ ರಂದು ಆರೋಪಿತ ನೌಕರರು ಎರಡನೇ ಕಾರಣ ಕೇಳಿ ನೋಟೀಸ್‌ಗೆ ಕೆಳಗಿನಂತೆ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

1) ಅಪೆಕ್ಸ್ ಕೋರ್ಟ್‌ನಲ್ಲಿ ನೌಕರರ ವಿರುದ್ಧ ಆರೋಪಗಳು ಸಾಬೀತಾಗದೆ ದೋಷಮುಕ್ತರನ್ನಾಗಿ ಆದೇಶಿಸಲಾಗಿರುತ್ತದೆ.
2) ಅಪರ ನಿಬಂಧಕರು ವಿಚಾರಣೆಗಳು 4 ಅಥವಾ 11, ಕರ್ನಾಟಕ ಲೋಕಾಯುಕ್ತ ಇವರಿಂದ ದೋಷರೋಪಣಾ ಪಟ್ಟಿ ಸಲ್ಲಿಕೆಯಾಗಿದ್ದು, ಸರ್ಕಾರವು ಇವರಿಗೆ ಇಲಾಖಾ ವಿಚಾರಣೆ ನಡೆಸಲು ವಹಿಸಿರುವುದಿಲ್ಲ. ವರದಿಯಲ್ಲಿ ಮಾನ್ಯ ಅಪೆಕ್ಸ್ ಕೋರ್ಟ್‌ನ ಆದೇಶ ಹಾಗೂ ಸಾಕ್ಷಿಗಳನ್ನು ಅಲ್ಲಗಳೆದಿರುತ್ತಾರೆ. ಆದ್ದರಿಂದ ಸಂಪೂರ್ಣ ವಿಚಾರಣೆಯು ನಿಯಮಬಾಹಿರವಾಗಿರುತ್ತದೆ ಎಂದು ಆಕ್ಷೇಪಿಸಿರುತ್ತಾರೆ.
3) ವಿಚಾರಣಾಧಿಕಾರಿಯವರು ರಕ್ಷಣಾ ಹೇಳಿಕೆ ಹಾಗೂ ಸಾಕ್ಷಿ ಹೇಳೀಕೆ ಮತ್ತು ದಾಖಲಾತಿಗಳನ್ನು ತನಿಖೆ ಸಂದರ್ಭದಲ್ಲಿ ಪರಿಗಣಿಸಿರುವುದಿಲ್ಲ.

ನೌಕರರಿಂದ ಯಾವುದೇ ಹಣ ದುರುಪಯೋಗವಾಗಿರುವುದರ ಬಗ್ಗೆ ಯಾವುದೇ ಆರೋಪಗಳು ಇರುವುದಿಲ್ಲ. ಆದ್ದರಿಂದ ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುವ ದಂಡನೆಯು ನಿಯಮಬಾಹಿರವಾಗಿರುತ್ತದೆ ಎಂದು ತಿಳಿಸಿರುತ್ತಾರೆ. ಕೆಪಿಟಿಸಿಎಲ್ ಹೈಕೋರ್ಟ್ ದಾವೆ 2015(2) ಎಕೆಆರ್ 399 ರನ್ವಯ ಮಾನ್ಯ ಉಪಲೋಕಾಯುಕ್ತರು ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರಿಯಾಗಿರುವುದಿಲ್ಲವೆಂದು ತಿಳಿಸಿರುತ್ತಾರೆ. ಆದುದರಿಂದ, ಮಾನ್ಯ ಉಪಲೋಕಾಯುಕ್ತರ ವರದಿಯನ್ನು ತಿರಸ್ಕರಿಸುವಂತೆ ಕೋರಿರುತ್ತಾರೆ.

ಸದರಿ ಪ್ರಕರಣದ ಕುರಿತು ಅಪರ ನಿಬಂಧಕರು ವಿಚಾರಣೆಗಳು-11, ಕರ್ನಾಟಕ ಲೋಕಾಯುಕ್ತ ರವರು ಇಲಾಖಾ ವಿಚಾರಣೆ ನಡೆಸಿ ವರದಿ ಸಲ್ಲಿಸಿದ್ದು, ಸದರಿ ನೌಕರರ ವಿರುದ್ಧದ ಆರೋಪಗಳು ಸಾಬೀತಾಗಿರುವುದಕ್ಕೆ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ವಿಚಾರಣಾ ವರದಿಯ ಪ್ರಮುಖ ಅಂಶಗಳನ್ನು ಈ ಕೆಳಕಂಡಂತೆ ಪುನರುಚ್ಛರಿಸಿದೆ:-

"25. Evidence of PW3 would show that after communication by complainant he entered the room of DGO where the complainant pointed out DGO and narrated as to what transpired till then in that room. He has spoken to wash of fingers of both hands of DGO and change of color of finger wash of right hand DGO. He has spoken to seizure of tainted notes from the rexin bag which was in possession of DGO. Suggestion made to PW3 suggesting that DGO was under intoxication of alcohol and that he encashed the said witness has been denied by him. His eveidence touching change of color of right hand finger was of DGO and seizure of taninted notes had not been seriously assailed during his cross examination and thus his evidence establishes that DGO did possess tainted notes. Explanation in writing offered by DGO cannot be accepted for the reason that if really the complainant had given cash which was collected by way of tax, DGO is expected to state as to how much exactly towards tax was withheld by the complainant earlier to order of suspension.

26. To sum up, evidence as discussed above establishes demand and acceptance of taninted notes by DGO and failure on the part of DGO to offer satisfactory and cinvicing explanation. Seizure of tainted notes from the possession of DGO stands established. Possession of unaccounted money attracts misconduct within the purview of Rule 3 (1)(i) to (iii) of The Karnataka Civil Services (Conduct) Rules, 1966.

27. Charge against DGO by name Sri Virupanagowda that in order to extend official favour to the complainant i.e., in the matter of revocation of suspension order dated 11.12.2010 of the complainant, the DGO demanded and accepted illegal gratification of a sum of Rs.5,000/- in the residential room of DGO in the building of one Rudraiah Soppinamatha which is in the first cross road of Ashoka Nagar, Ranebennur from the complainant on 22.03.2011 ar 07.40PM and during investigation DGO failed to offer satisfactory explanation fro possession of the said amount before the Investigating Officer and thereby DGO is guilty of misconduct within the purview of Rule 3 (1)(i) to (iii) of The Karnataka Civil Services (Conduct) Rules, 1966 is proved."

ಸರ್ಕಾರವು ಪರಿಶೀಲಿಸಿ, ಆರೋಪದ ತೀವ್ರತೆಗೆ ಅನುಗುಣವಾಗಿ ಮಾನ್ಯ ಉಪಲೋಕಾಯುಕ್ತರು ಶ್ರೀ ವಿರುಪನಗೌಡ ಸಿದ್ದನಗೌಡ ಪಾಟೀಲ್, ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಆಸುಂಡಿ ಗ್ರಾಮ ಪಂಚಾಯತಿ, ರಾಣೆಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957ರ ರ ನಿಯಮ 214 ರನ್ವಯ ಸದರಿ ನೌಕರರಿಗೆ ಪಾವತಿಸಲಾಗುವ ಪಿಂಚಣಿಯಲ್ಲಿ ಶೇ.50ರಷ್ಟನ್ನು ಶಾಶ್ವತವಾಗಿ ತಡೆಹಿಡಿಯುವ ದಂಡನೆಯನ್ನು ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ. ಈ ಹಿನ್ನೆಲೆಯಲ್ಲಿ ಶ್ರೀ ವಿರುಪನಗೌಡ ಸಿದ್ದನಗೌಡ ಪಾಟೀಲ್, ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಆಸುಂಡಿ ಗ್ರಾಮ ಪಂಚಾಯತಿ, ರಾಣೆಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಉತ್ತರವನ್ನು ಅಂಗೀಕರಿಸಲು ಬರುವುದಿಲ್ಲ. ಮತ್ತು ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸನ್ನು ಒಪ್ಪುವುದು ಸಮಂಜಸವೆಂದು ಕಂಡು ಬರುತ್ತದೆ. ಈ ಹಿನ್ನೆಲೆಯಲ್ಲಿ ವಿಚಾರಣಾ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸನ್ನು ಅಂಗೀಕರಿಸಿ ಶ್ರೀ ವಿರುಪನಗೌಡ ಸಿದ್ದನಗೌಡ ಪಾಟೀಲ್, ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಆಸುಂಡಿ ಗ್ರಾಮ ಪಂಚಾಯತಿ, ರಾಣೆಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957ರ ರ ನಿಯಮ 214 ರನ್ವಯ ಸದರಿ ನೌಕರರಿಗೆ ಪಾವತಿಸಲಾಗುವ ಪಿಂಚಣಿಯಲ್ಲಿ ಶೇ.50 ರಷ್ಟನ್ನು ಶಾಶ್ವತವಾಗಿ ತಡೆಹಿಡಿಯುವ ದಂಡನೆಯನ್ನು ವಿಧಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 151 ಗ್ರಾಪಂಕಾ 2018, ಬೆಂಗಳೂರು, ದಿನಾಂಕ: 03.07.2018</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವಾ(ನಡತೆ) ನಿಯಮಗಳು, 1966ರ ನಿಯಮ 3(1)(i) ರಿಂದ (iii) ರಡಿ ದುರ್ನಡತೆಯ ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ ಮಾನ್ಯ ಉಪಲೋಕಾಯುಕ್ತರವರ ವರದಿಯಲ್ಲಿನ ಶಿಫಾರಸ್ಸಿನನ್ವಯ, ಶ್ರೀ ವಿರುಪನಗೌಡ ಸಿದ್ದನಗೌಡ ಪಾಟೀಲ್, ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಆಸುಂಡಿ ಗ್ರಾಮ ಪಂಚಾಯತಿ, ರಾಣೆಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957ರ ರ ನಿಯಮ 214(1)(ಎ) ರನ್ವಯ ಸದರಿ ನೌಕರರಿಗೆ ಪಾವತಿಸಲಾಗುವ ಪಿಂಚಣಿಯಲ್ಲಿ ಶೇ.50ರಷ್ಟನ್ನು ಶಾಶ್ವತವಾಗಿ ತಡೆಹಿಡಿಯುವ ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.

2) ಮಾನ್ಯ ಉಪಲೋಕಾಯುಕ್ತ-1 ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಅಪರ ನಿಬಂಧಕರು ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಹಾವೇರಿ ಜಿಲ್ಲಾ ಪಂಚಾಯತಿ, ಹಾವೇರಿ.
6) ಕಾರ್ಯನಿರ್ವಾಹಕ ಅಧಿಕಾರಿ, ರಾಣಿಬೆನ್ನೂರು ತಾಲ್ಲೂಕು ಪಂಚಾಯತಿ, ರಾಣೀಬೆನ್ನೂರು, ಹಾವೇರಿ ಜಿಲ್ಲೆ. (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವಂತೆ ಕೋರಿದೆ.)
7) ಶ್ರೀ ವಿರುಪನಗೌಡ ಸಿದ್ದನಗೌಡ ಪಾಟೀಲ್, ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಆಸುಂಡಿ ಗ್ರಾಮ ಪಂಚಾಯತಿ, ರಾಣೆಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ
8) ಗಣಕಕೋಶ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ. – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.